RNU AIR DHARWAD

JUNE 25, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

**ದೇಶದಲ್ಲಿ, ಒಟ್ಟು 21 ತಿಂಗಳುಗಳ ಕಾಲ ಜ್ಯಾರಿಯಲ್ಲಿದ್ದ,** ತುರ್ತು ಪರಿಸ್ಥಿತಿ ಹೇರಿಕೆಯಾಗಿ, ಇಂದಿಗೆ 50 ವರ್ಷಗಳು ಸಂದಿವೆ. ನಾಡಿನ ವಿವಿಧೆಡೆಗಳಲ್ಲಿ ತುರ್ತು ಪರಿಸ್ಥಿತಿಯ ಕರಾಳತೆಯನ್ನು ಬಿಂಬಿಸುವ ಸಂವಿಧಾನ ಹತ್ಯಾ ದಿನ ಆಚರಿಸಲಾಗುತ್ತಿದೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಮಂತ್ರಿ ನರೇಂದ್ರ ಮೋದಿಯವರು, ತುರ್ತು ಪರಿಸ್ಥಿತಿ ಹೇರಿಕೆಯಾಗಿದ್ದ ಸಂದರ್ಭ, ಹಲವು ಜನ ನಾಯಕರು, ಸಾಮಾಜಿಕ ಕಾರ್ಯಕರ್ತರು, ವಿದ್ಯಾರ್ಥಿಗಳು ಜೈಲುವಾಸ ಅನುಭವಿಸಿದ್ದರು. ಪತ್ರಿಕಾ ಸ್ವಾತಂತ್ರ್ಯದ ಹರಣವಾಯಿತು ಹಾಗೂ ದೇಶದ ಸಾಂವಿಧಾನಿಕ ಹಕ್ಕುಗಳನ್ನು ಕಸಿಯಲಾಯಿತು ಎಂದಿದ್ದಾರೆ.

<><><>

**ಧಾರವಾಡದ ಹಿರಿಯ ಸಾಮಾಜಿಕ** ಕಾರ್ಯಕರ್ತರಾದ, ಶ್ರೀಧರ ನಾಡಿಗೇರ, ತುರ್ತು ಪರಿಸ್ಥಿತಿ ಸಂದರ್ಭ, 1 ವರ್ಷ ಜೈಲು ಶಿಕ್ಷೆ ಅನುಭವಿಸಿದ್ದರು, ತುರ್ತು ಪರಿಸ್ಥಿತಿಯ ಕರಾಳ ದಿನಗಳ ಕುರಿತು, ಅವರು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ಹಂಚಿಕೊಂಡಿದ್ದಾರೆ.

<><><>

**ತುರ್ತು ಪರಿಸ್ಥಿತಿಯ ಕರಾಳ ದಿನಗಳ** ನೆನಪು, ದೇಶದ ಜನಮಾನಸದಲ್ಲಿ ಮಾಸದೆ ಉಳಿದಿದೆ, ನಾಗರಿಕ ಹಾಗೂ ಮಾಧ್ಯಮ ಸ್ವಾತಂತ್ರ್ಯದ ಮೇಲೆ ನಿರ್ಬಂಧ ಹೇರಲಾಗಿದ್ದ ಕಾಲದಲ್ಲಿ, ಹೋರಾಡಿದವರಿಗೆ ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ಎಕ್ಸ್ ಖಾತೆ ಮೂಲಕ ತಮ್ಮ ನಮನಗಳನ್ನು ಸಲ್ಲಿಸಿದ್ದಾರೆ.

<><><>

**ಆಂಧ್ರಪ್ರದೇಶದ ಪ್ರಸಿದ್ಧ ತಿರುಪತಿ** ದೇವಸ್ಥಾನವಿರುವ ತಿರುಮಲದಲ್ಲಿ, ನೂತನವಾಗಿ ನಿರ್ಮಾಣಗೊಂಡಿರುವ ಕರ್ನಾಟಕ ಛತ್ರ, 500 ಆಸನ ವ್ಯವಸ್ಥೆಗಳನ್ನು ಹೊಂದಿರುವ, ಶ್ರೀ ಕೃಷ್ಣರಾಜೇಂದ್ರ ಒಡೆಯರ ಕಲ್ಯಾಣ ಮಂಟಪವನ್ನು, ಕರ್ನಾಟಕ ರಾಜ್ಯ ಸಾರಿಗೆ ಮತ್ತು ಮುಜರಾಯಿ ಖಾತೆ ಸಚಿವ ರಾಮಲಿಂಗಾರೆಡ್ಡಿ ಉದ್ಘಾಟಿಸಿದರು. ಈ ಬಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು ಸೆಪ್ಟೆಂಬರ್ ತಿಂಗಳಲ್ಲಿ ಛತ್ರದ ಸಂಪೂರ್ಣ ಕಾಮಗಾರಿ ಮುಕ್ತಾಯಗೊಳ್ಳಲಿದೆ, ವಿಐಪಿ ಬ್ಲಾಕ್, ಕಲ್ಯಾಣಿ ಹಾಗೂ ನೂತನ ದೇವಸ್ಥಾನದ ಉದ್ಘಾಟನೆ ಎರಡೂ ರಾಜ್ಯಗಳ ಮುಖ್ಯಮಂತ್ರಿಯವರ ಸಮ್ಮುಖದಲ್ಲಿ ನಡೆಯಲಿದೆ ಎಂದಿದ್ದಾರೆ.

<><><>

**ಬೀದರ ಜಿಲ್ಲೆಯನ್ನು ಮಾದಕ** ವ್ಯಸನ ಮುಕ್ತ ಜಿಲ್ಲೆಯಾಗಿಸಲು, ಎಲ್ಲರೂ ಕೈಜೋಡಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿ ್ಠಾಧಿಕಾರಿ ಪ್ರದೀಪ ಗುಂಟಿ ಹೇಳಿದ್ದಾರೆ. ಬೀದರ ಪೊಲೀಸ್ ಉಪ ವಿಭಾಗದ ವತಿಯಿಂದ, ನಗರದ ಕರ್ನಾಟಕ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಅಂತರಾಷ್ಟ್ರೀಯ ಮಾದಕದ್ರವ್ಯ ಸೇವನೆ ಮತ್ತು ಸಾಗಾಣಿಕೆ ವಿರೋಧಿ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮಾದಕದ್ರವ್ಯ ಸೇವನೆಯಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಜನರು ಮಾದಕ ವಸ್ತುಗಳ ಸೇವನೆ ಮಾಡಬಾರದು, ಕೆಟ್ಟ ವ್ಯಸನಗಳಿದ್ದರೆ, ಅವುಗಳನ್ನು ಬಿಟ್ಟು, ಉತ್ತಮ ಜೀವನ ರೂಪಿಸಿಕೊಳ್ಳಬೇಕು ಎಂದರು.

<><><>

**ಶಿವಮೊಗ್ಗ ಜಿಲ್ಲೆಯಲ್ಲಿ,** ಆರಿದ್ರಾ ಮಳೆ ಅಬ್ಬರಿಸುತ್ತಿದೆ, ಮುನ್ನೆಚ್ಚರಿಕೆ ಕ್ರಮವಾಗಿ ಇಂದು, ಹೊಸನಗರ ತಾಲೂಕಿನ ಅಂಗನವಾಡಿ, ಶಾಲೆ, ಕಾಲೇಜುಗಳಿಗೆ ತೆಹಸೀಲ್ದಾರ್ ರಶ್ಮೀ ಹಾಲೇಶ ರಜೆ ಘೋಷಿಸಿದ್ದಾರೆ. ಕಳೆದ 24 ಗಂಟೆಗಳಲ್ಲಿ ಮಾನಿ ಜಲಾಶಯದ ವ್ಯಾಪ್ತಿಯಲ್ಲಿ 128 ಮಿಲ್ಲಿ ಮೀಟರ ಮಳೆಯಾಗಿದೆ. ಯಡೂರಿನಲ್ಲಿ 146 ಮಿಲ್ಲಿ ಮೀಟರ ಹಾಗೂ ಹುಲಿಕಲ್‌ನಲ್ಲಿ 122 ಮಿಲ್ಲಿ ಮೀಟರ ಮಳೆ ದಾಖಲಾಗಿದೆ.

<><><>

**ಕರ್ತವ್ಯ ನಿರ್ವಹಿಸುವ ಸ್ಥಳಗಳಲ್ಲಿ** ಮಹಿಳೆಯರ ಮೇಲಿನ ದೌರ್ಜನ್ಯ ತಡೆ ಕಾಯಿದೆ 2013 ರ, ಪರಿಣಾಮಕಾರಿ ಅನುಷ್ಠಾನಕ್ಕಾಗಿ, ಶೀ ಬಾಕ್ಸ್ ಪೋರ್ಟಲ್ ಆರಂಭಿಸಲಾಗಿದ್ದು, ಖಾಸಗಿ ಹಾಗೂ ಸಾರ್ವಜನಿಕ ಸಂಸ್ಥೆಗಳು, ಸಂಘಟಿತ ಹಾಗೂ ಅಸಂಘಟಿತ ವಲಯಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಮಹಿಳೆಯರು ಇದರ ಪ್ರಯೋಜನ ಪಡೆಯಬೇಕು ಎಂದು ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದ್ದಾರೆ.

<><><>

**ಸಾರ್ವಜನಿಕ ಪಡಿತರ** ವ್ಯವಸ್ಥೆ ಅಧೀನದ, ಅನ್ನಭಾಗ್ಯ ಯೋಜನೆ ಫಲಾನುಭವಿ **ಅಂತ್ಯೋದಯ** ಹಾಗೂ ಬಿಪಿಎಲ್ ಪಡಿತರ ಚೀಟಿ ಹೊಂದಿರುವವರು, ಜೂನ್ 30 ರೊಳಗೆ ಕಡ್ಡಾಯವಾಗಿ ಇ–ಕೆವೈಸಿ ಮಾಡಿಕೊಳ್ಳುವಂತೆ ವಿಜಯಪುರ ಜಿಲ್ಲಾಧಿಕಾರಿ ಟಿ.ಭೂ ಬಾಲನ್ ತಿಳಿಸಿದ್ದಾರೆ.

<><><>

**ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ರಸ್ತೆಗಳಲ್ಲಿನ** ಗುಂಡಿಗಳನ್ನು ಗುರುತಿಸಿ ಶೀಘ್ರವೇ ಮುಚ್ಚುವ ಮೂಲಕ ಅವಘಡಗಳನ್ನು ತಪ್ಪಿಸಬೇಕು ಎಂದು ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>